69-ಎ-156

# ಕರ್ನಾಟಕ ವಿಧಾನ ಪರಿಷತ್ತು

ವಿಧಾನ ಪರಿಷತ್ತಿನ ಮಾನ್ಯ ಸದಸ್ಯರಾದ ಶ್ರೀ ತಿಪ್ಪಣ್ಣಪ್ಪ ಕಮಕನೂರ, ಇವರು ಶೂನ್ಯ ವೇಳೆಯಲ್ಲಿ ಇತ್ತೀಚಿನ ದಿನಗಳಲ್ಲಿ ಕರ್ನಾಟಕದಲ್ಲಿ ಸಾಂಪ್ರದಾಯಿಕ ದೇಶಿ ಮದ್ಯ ಮತ್ತು ಬೀಡಿಗಳನ್ನು ತ್ಯಜಿಸಿ ವಿದೇಶಿ ಮದ್ಯ ಮತ್ತು ಜಗಿಯುವ ತಂಬಾಕಿನತ್ತ ಯುವಜನತೆ ಮುಖ ಮಾಡಿರುವ ಬಗ್ಗೆ ದಿನಾಂಕ: 18.08.2025ರ ಸಂಯುಕ್ತ ಕರ್ನಾಟಕ ದಿನ ಪತ್ರಿಕೆಯಲ್ಲಿ 'ವಿದೇಶಿ ಮದ್ಯ, ತಂಬಾಕಿನತ್ತ ಜನರ ಚಿತ್ತ' ಶೀರ್ಷಿಕೆಯಡಿ ವರದಿ ಪ್ರಕಟವಾಗಿರುತ್ತದೆ.

ಒಂದು ದಶಕದ ಹಿಂದೆ ಬೀಡಿ ಹೊಗೆಗೆ ಸಿಕ್ಕಿಹಾಕಿಕೊಂಡಿದ್ದ ಗ್ರಾಮೀಣ ಕರ್ನಾಟಕ, ಇಂದು ಹೊಸ ನಶೆಯ ಹಾದಿಯಲ್ಲಿರುವುದು ಅಚ್ಚರಿಯ ಸಂಗತಿಯಾಗಿರುತ್ತದೆ. ಆರ್ಥಿಕ ಮತ್ತು ಆರೋಗ್ಯ ತಜ್ಞರ ಅಂದಾಜುಗಳ ಅಂದಾಜಿನಂತೆ ಗ್ರಾಮೀಣ ಪ್ರದೇಶದಲ್ಲಿ ಮಾದಕ ವಸ್ತುಗಳ ಮೇಲಿನ ತಲಾ ವಾರ್ಷಿಕ ವೆಚ್ಚ 58,000 ಆಗಿದ್ದು, ನಗರ ಪ್ರದೇಶದಲ್ಲಿ 1.00 ಲಕ್ಷ ಮೀರಿದೆ. ವಿಶೇಷವಾಗಿ ವಿದೇಶಿ ಮದ್ಯ ಮತ್ತು ಬಿಯರ್ ಮೇಲಿನ ವೆಚ್ಚವು 10-15% ಏರಿಕೆ ಕಾಣುವ ಸಾಧ್ಯತೆ ಇದೆ ಎಂಬ ವಿಷಯವನ್ನು ಸಾರ್ವಜನಿಕ ಹಣಕಾಸು ಮತ್ತು ನೀತಿ ಸಂಸ್ಥೆ ಬಹಿರಂಗಪಡಿಸಿದೆ. ಒಂದು ಕಾಲದಲ್ಲಿ ವಯಸ್ಕರು ಮತ್ತು ವೃದ್ಧರ ಹವ್ಯಾಸವೆಂದು ಪರಿಗಣಿಸಲಾಗಿದ್ದ ತಂಬಾಕು ಮತ್ತು ಮದ್ಯಪಾನದಂತಹ ವ್ಯಸನಗಳು ಈಗ ರಾಜ್ಯದ ಯುವ ಪೀಳಿಗೆ ಮತ್ತು ಮಕ್ಕಳನ್ನೂ ಆವರಿಸುತ್ತಿರುವುದು ಆತಂಕಕಾರಿ ಸಂಗತಿಯಾಗಿದೆ.

ಮಕ್ಕಳ ಸ್ಕೂಲ್ ಬ್ಯಾಗನಲ್ಲಿ ಪೆನ್ ಬದಲು ಸಿಗರೇಟ್ ಪ್ಯಾಕ್‌ಗಳು, ಕಾಲೇಜು ಕ್ಯಾಂಟೀನ್‌ಗಳಲ್ಲಿ ಜಗಿಯುವ ತಂಬಾಕು ಬಳಕೆ ಮತ್ತು ಪಾರ್ಟಿಗಳಲ್ಲಿ ಮದ್ಯದ ಬಳಕೆ ಸಾಮಾನ್ಯವೆಂಬಂತೆ ಹರಡಿದೆ. ಜನರ ಆರ್ಥಿಕ ಮಟ್ಟ ಸುಧಾರಿಸುತ್ತಿರುವುದರಿಂದ ಹೆಚ್ಚು ಬೆಲೆಯ ಸಿಗರೇಟ್ ಮತ್ತು ವಿದೇಶಿ ಮದ್ಯಕ್ಕೆ ಬೇಡಿಕೆ ಹೆಚ್ಚಿರುವುದು ತಿಳಿದುಬಂದಿರುತ್ತದೆ.

ದಯಮಾಡಿ, ಆರೋಗ್ಯಕ್ಕೆ ಹಾನಿಕಾರಕವಾದ ಸಿಗರೇಟ್ ಮತ್ತು ವಿದೇಶಿ ಮದ್ಯದಂತಹ ದುಶ್ಚಟಕ್ಕೆ ಯುವಕರು ಬಲಿಯಾಗುವುದು, ಆ ಮೂಲಕ ತಾವು ದುಡಿದು ಗಳಿಸಿದಂಥ ಆದಾಯವನ್ನು ನಷ್ಟ ಮಾಡಿಕೊಳ್ಳುವುದನ್ನು ನಿಯಂತ್ರಿಸಬೇಕು. ನಶೆಮುಕ್ತ ಕರ್ನಾಟಕಕ್ಕೆ ಒತ್ತು ನೀಡುವಂಥ ಕೆಲಸವನ್ನು ಸರ್ಕಾರ ಮಾಡುವ ಬಗ್ಗೆ ಪ್ರಸ್ತಾಪಿಸಿರುವುದಕ್ಕೆ

**ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರ ಹೇಳಿಕೆ:-**

ರಾಜ್ಯ ತಂಬಾಕು ನಿಯಂತ್ರಣ ಘಟಕದಡಿಯಲ್ಲಿ ರಾಜ್ಯಾದ್ಯಂತ ರಾಷ್ಟ್ರೀಯ ತಂಬಾಕು ನಿಯಂತ್ರಣ ಕಾರ್ಯಕ್ರಮವನ್ನು ಅನುಷ್ಠಾನಗೊಳಿಸಲಾಗುತ್ತಿದೆ. ಸದರಿ ಕಾರ್ಯಕ್ರಮದಡಿಯಲ್ಲಿ ಶಾಲಾ ಮತ್ತು ಕಾಲೇಜು ಕಾರ್ಯಕ್ರಮಗಳನ್ನು ಆಯೋಜಿಸಿ ತಂಬಾಕು ಉತ್ಪನ್ನಗಳ ದುಷ್ಪರಿಣಾಮಗಳ ಕುರಿತು ಅರಿವು ಮೂಡಿಸಲಾಗುತ್ತಿದೆ.

ಕೋಟ್ಪಾ 2003 ಕಾಯ್ದೆಯಡಿ ಶಿಕ್ಷಣ ಸಂಸ್ಥೆಗಳ 100 ಮೀಟರ್ ಅಂತರದಲ್ಲಿ ಯಾವುದೇ ತಂಬಾಕು ಉತ್ಪನ್ನಗಳನ್ನು ಮಾರಾಟ ಮಾಡುವಂತಿಲ್ಲ ಹಾಗೂ ಸದರಿ ಉಲ್ಲಂಘನೆಗೆ ರೂ.1,000/-ದವರೆಗೆ ದಂಡ ವಿಧಿಸಲಾಗುವುದು.

ತಂಬಾಕು ವ್ಯಸನಿಗಳಿಗೆ ಎಲ್ಲಾ ಜಿಲ್ಲಾ ಆಸ್ಪತ್ರೆಗಳಲ್ಲಿ ಉಚಿತವಾಗಿ ಆಪ್ತ ಸಮಾಲೋಚನೆ ಹಾಗೂ Nicotine Replacement Therapy ಯನ್ನು ನೀಡಲಾಗುತ್ತಿದೆ.

2024-25ರಲ್ಲಿ ತಂಬಾಕು ವ್ಯಸನ ಮುಕ್ತ ಕೇಂದ್ರಗಳಲ್ಲಿ ಉಚಿತವಾಗಿ ಆಪ್ತ ಸಮಾಲೋಚನೆ ಪಡೆದ

19.8.25

ತಂಬಾಕು ವ್ಯಸನಿಗಳ ಸಂಖ್ಯೆ- **1,45,751**.

ರಾಷ್ಟ್ರೀಯ ಮಾನಸಿಕ ಆರೋಗ್ಯ ಕಾರ್ಯಕ್ರಮದಡಿ 2024-25ರಲ್ಲಿ ಮದ್ಯ ಮತ್ತು ಮಾದಕ ವಸ್ತು ವ್ಯಸನ ಸಮಸ್ಯೆಯುಳ್ಳವರಿಗೆ ಆಪ್ತ ಸಮಾಲೋಚನೆ ಹಾಗೂ ಚಿಕಿತ್ಸೆ ನೀಡಿದ ಸಂಖ್ಯೆ- **1,52,857**.

**ಅಬಕಾರಿ ಇಲಾಖೆ ವತಿಯಿಂದ ಕೆಳಕಂಡ ಕ್ರಮಗಳನ್ನು ಕೈಗೊಳ್ಳಲಾಗುತ್ತಿದೆ.**

- ಸಾರ್ವಜನಿಕರು ಹಾಗೂ ಯುವ ಜನತೆಯಲ್ಲಿ ಮದ್ಯ ಸೇವನೆಯಿಂದ/ಮಾದಕ ವಸ್ತುಗಳ ವ್ಯಸನದಿಂದಾಗುವ ದುಷ್ಪರಿಣಾಮಗಳ ಕುರಿತು ಸೂಕ್ತ ತಿಳುವಳಿಕೆ ನೀಡುವ ಸಂಬಂಧ ನಗರ ಪ್ರದೇಶ, ಗ್ರಾಮೀಣ ಪ್ರದೇಶಗಳಲ್ಲಿ, ಶಾಲಾ-ಕಾಲೇಜುಗಳು, ವೈದ್ಯಕೀಯ ಹಾಗೂ ಇಂಜಿನಿಯರಿಂಗ್ ಕಾಲೇಜುಗಳಲ್ಲಿ ಕಾರ್ಯಾಗಾರ, ಜಾಥಾ ಹಾಗೂ ತರಗತಿಗಳಿಗೆ ಭೇಟಿ ನೀಡಿ ವಿಶೇಷ ಉಪನ್ಯಾಸಗಳನ್ನು ರಾಜ್ಯವ್ಯಾಪ್ತಿ ಹಮ್ಮಿಕೊಂಡು ಯುವ ಜನತೆಯಲ್ಲಿ ಜಾಗೃತಿ ಮೂಡಿಸಲು ಕ್ರಮ ಕೈಗೊಳ್ಳಲಾಗಿರುತ್ತದೆ.

- ಶೈಕ್ಷಣಿಕ ಸಂಸ್ಥೆಗಳ ಹಾಗೂ ಅವುಗಳ ಸುತ್ತ ಮುತ್ತ ಪ್ರದೇಶಗಳಲ್ಲಿ ಯಾವುದೇ ರೀತಿಯ ಮದ್ಯಮಾದಕ ವಸ್ತುಗಳ ವಹಿವಾಟಿಗೆ ಆಸ್ಪದ ನೀಡದಿರುವ ಸಂಬಂಧ ಜಾರಿ ಕ್ರಮಗಳಾದ - ದಾಳಿ, ಶೋಧನೆ, ಪಹರೆ ಹಾಗೂ ಸೂಕ್ಷ್ಮ ಪ್ರದೇಶಗಳಲ್ಲಿ ಕಣ್ಗಾವಲು, ಅಗತ್ಯ ಗೌಪ್ಯ ಮಾಹಿತಿ ಸಂಗ್ರಹಣೆ ಇವುಗಳನ್ನು ಕೈಗೊಳ್ಳಲಾಗುತ್ತಿದ್ದು, ಶೈಕ್ಷಣಿಕ ಸಂಸ್ಥೆಗಳ ಸುತ್ತಮುತ್ತ ಹಾಗೂ ಪ್ರಮುಖ ಸನ್ನದುಗಳಲ್ಲಿ ಯಾವುದೇ ರೀತಿಯ ಮಾದಕ ವಸ್ತುಗಳ ಅಕ್ರಮ ಮಾರಾಟ ಹಾಗೂ ಸೇವನೆಯಾಗದಂತೆ ಇಲಾಖಾ ಸಿಬ್ಬಂದಿಗಳು ಆಗಿಂದಾಗ್ಗೆ ಭೇಟಿ ನೀಡಿ ಕ್ರಮ ಕೈಗೊಳ್ಳಲು ಸೂಚಿಸಲಾಗಿದ್ದು, ಯಾವುದೇ ರೀತಿಯ ಅಕ್ರಮಗಳು ಕಂಡು ಬಂದಲ್ಲಿ ನಿರ್ದಾಕ್ಷಿಣ್ಯವಾಗಿ ಕ್ರಮ ಕೈಗೊಳ್ಳಲಾಗಿರುತ್ತದೆ. NDPS (Narcotic Drugs and Phychotropic Substances Act, 1985) ಕಾಯ್ದೆಯಡಿಯಲ್ಲಿ ಮಾದಕ ವಸ್ತು/ಮಾದಕ ದ್ರವ್ಯಗಳ ಉತ್ಪಾದನೆ, ಮಾರಾಟ, ಸಾಗಾಣಿಕೆ, ಸೇವನೆ ಸಂಬಂಧ ಪ್ರಕರಣಗಳನ್ನು ಪತ್ತೆ ಹಚ್ಚಿ ಕಾನೂನು ಕ್ರಮ ಜರುಗಿಸಲಾಗಿರುತ್ತದೆ.

- ಮದ್ಯ ಹಾಗೂ ಮಾದಕ ವಸ್ತುಗಳ ಸೇವನೆಯಿಂದ ಆಗುವ ದುಷ್ಪರಿಣಾಮಗಳ ಕುರಿತು ಕ್ಷೇತ್ರ ಸಿಬ್ಬಂದಿಯವರಿಂದ ಗ್ರಾಮಾಂತರ ಹಾಗೂ ನಗರ ಪ್ರದೇಶಗಳಲ್ಲಿ ಜನ ಜಾಗೃತಿ ಕಾರ್ಯಕ್ರಮಗಳನ್ನು ಆಯೋಜಿಸಲಾಗುತ್ತಿದೆ. ಶೈಕ್ಷಣಿಕ ಸಂಸ್ಥೆಗಳು ಹಾಗೂ ವೃತ್ತಿಪರ ಕಾಲೇಜುಗಳಲ್ಲಿ ಡ್ರಗ್ಸ್ ಸೇವನೆಯಿಂದ ಆಗುವ ಅನಾಹುತಗಳ ಬಗ್ಗೆ ಕಮ್ಮಟಗಳನ್ನು ಏರ್ಪಡಿಸಿ, ಜಾಗೃತಿ ಮೂಡಿಸಲಾಗುತ್ತಿದೆ. ಗ್ರಾಮ ಸಭೆಗಳಲ್ಲಿ ಡ್ರಗ್ಸ್‌ಗೆ ಸಂಬಂಧಿಸಿದ ವಿಷಯಗಳ ಬಗ್ಗೆ ಚರ್ಚಿಸಲಾಗುತ್ತಿದೆ. ತಾಲ್ಲೂಕು ಹಾಗೂ ಜಿಲ್ಲಾ ಮಟ್ಟದ ಕಾನೂನು ಅರಿವು ಕಾರ್ಯಕ್ರಮಗಳಲ್ಲಿ ಡ್ರಗ್ಸ್‌ನಿಂದಾಗುವ ದುಷ್ಪರಿಣಾಮಗಳೊಂದಿಗೆ ಕಾನೂನಿನ ತಿಳುವಳಿಕೆಯನ್ನು ನೀಡಲಾಗುತ್ತಿದೆ.

- ಜಿಲ್ಲಾ ಮಟ್ಟದಲ್ಲಿ ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿ ಸ್ಥಾಯಿ ಸಮಿತಿ ಸಭೆಯನ್ನು ಏರ್ಪಡಿಸಿ, ಇಲಾಖೆಯ ಅಧಿಕಾರಿಗಳು ಹಾಗೂ ಇತರೆ ಇಲಾಖೆಗಳೊಂದಿಗೆ ಸಮನ್ವಯ ಸಾಧಿಸಿ, ಅಕ್ರಮ ಹತ್ತಿಕ್ಕಲು ಕ್ರಮವಹಿಸುವ ಕುರಿತು ಪೋಲೀಸ್ ವರಿಷ್ಠಾಧಿಕಾರಿಗಳು ಮತ್ತು ಜಿಲ್ಲೆಯ ಇತರೆ ಇಲಾಖಾಧಿಕಾರಿಗಳೊಂದಿಗೆ ಜಂಟಿ ಕಾರ್ಯಾಚರಣೆ ನಡೆಸಲಾಗುತ್ತಿದೆ. ಕರ್ನಾಟಕ ಅಬಕಾರಿ ಕಾಯ್ದೆ 1965ರ ಕಲಂ 50 ರಂತೆ ಕಾರ್ಯವ್ಯಾಪ್ತಿಯಲ್ಲಿ ನಡೆಯುವ ಅಬಕಾರಿ ಅಕ್ರಮಗಳ ಕುರಿತು ಮಾಹಿತಿ ನೀಡಲು ತಿಳುವಳಿಕೆ ಪತ್ರಗಳನ್ನು ಜಾರಿಗೊಳಿಸಲಾಗಿರುತ್ತದೆ.

- ಶಾಲಾ-ಕಾಲೇಜುಗಳಿಂದ 100 ಮೀಟರ್ ಅಂತರದಲ್ಲಿ ಯಾವುದೇ ಸನ್ನದುಗಳು ಕಾರ್ಯ ನಿರ್ವಹಿಸಲು ಕರ್ನಾಟಕ ಅಬಕಾರಿ (ಸನ್ನದು ಸಾಮಾನ್ಯ ಷರತ್ತುಗಳು) ನಿಯಮಗಳು, 1967ರ

ನಿಯಮ-5 ರಡಿ ಅವಕಾಶವಿರುವುದಿಲ್ಲ. ಈ ಬಗ್ಗೆ ಕಟ್ಟುನಿಟ್ಟಿನ ಕ್ರಮ ಕೈಗೊಳ್ಳಲಾಗಿದೆ. ಸನ್ನದುಗಳಲ್ಲಿ ಅಪ್ರಾಪ್ತರಿಗೆ ಮದ್ಯ ಮಾರಾಟವನ್ನು ಅಬಕಾರಿ ನಿಯಮದನ್ವಯ ನಿಷೇಧಿಸಿದೆ. ಈ ಸಂಬಂಧ ಕಾರ್ಯನಿರ್ವಾಹಕ ಅಧಿಕಾರಿಗಳಿಂದ ಸನ್ನದುಗಳಲ್ಲಿ ಕಟ್ಟುನಿಟ್ಟಿನ ಕ್ರಮ ಕೈಗೊಳ್ಳಲಾಗಿದೆ.

- ಮದ್ಯ ಹಾಗೂ ಮಾದಕ ವಸ್ತುಗಳ ಬಳಕೆಯು ಯುವ ಪೀಳಿಗೆಯಲ್ಲಿ ಹೆಚ್ಚಾಗುತ್ತಿರುವ ಹಿನ್ನೆಲೆಯಲ್ಲಿ Supply Reduction ಗಾಗಿ ಮಕ್ಕಳು ಹಾಗೂ ಯುವ ಸಮುದಾಯಕ್ಕೆ ಶಿಕ್ಷಣ, ಸಮಾಲೋಚನೆ ಮತ್ತು ಸಮುದಾಯ/ಸಾರ್ವಜನಿಕ ಸಂಪರ್ಕ ಚಟುವಟಿಕೆ/ಕಾರ್ಯಾಗಾರಗಳನ್ನು ಹೆಚ್ಚಾಗಿ ನಡೆಸಿ ಅರಿವು ಮೂಡಿಸಲು ಕ್ರಮವಹಿಸಲಾಗಿದೆ. ಕೊಳಚೆ ಪ್ರದೇಶ/ಹೆಚ್ಚಿನ ಜನಸಾಂದ್ರತೆ ಇರುವ ವಾಸಸ್ಥಳಗಳಲ್ಲಿ ಮಾದಕ ವಸ್ತುಗಳ ವ್ಯಸನವು ಅಧಿಕವಾಗಿರುವುದನ್ನು ಮನಗಂಡು 18 ರಿಂದ 25 ವರ್ಷ ವಯಸ್ಸಿನ ಯುವ ಸಮುದಾಯಕ್ಕೆ ಶಿಕ್ಷಣದ ಮೂಲಕ ಮಾದಕ ದ್ರವ್ಯಗಳಿಂದಾಗುವ ಹಾನಿಯನ್ನು ವಿವರಿಸಲು ಆಡಿಯೋ ವಿಡಿಯೋ ಉಪಕರಣದ ಮೂಲಕ ಇಲಾಖೆಯ ಅಧಿಕಾರಿಗಳು ನಡೆಸುವ ಕಾರ್ಯಾಗಾರಗಳಲ್ಲಿ ಭಾಗವಹಿಸಲು ಕ್ರಮಕೈಗೊಳ್ಳಲಾಗಿದೆ. ಜಾಗೃತಿ ಕಾರ್ಯಗಳನ್ನು ಹೆಚ್ಚಾಗಿ ಕೊಳಚೆ ಪ್ರದೇಶ/ಹೆಚ್ಚಿನ ಜನಸಾಂದ್ರತೆ ಇರುವ ಸ್ಥಳಗಳಲ್ಲಿ ನಡೆಸಿ, ಯುವಕರನ್ನು ಗುರಿಯಾಗಿಸಿಕೊಂಡು ಕರಪತ್ರಗಳು, ಪೋಸ್ಟರ್, ಹೋರ್ಡಿಂಗ್ ಇತ್ಯಾದಿಗಳ ಮೂಲಕ ವಿತರಿಸಿ ಅರಿವು ಮೂಡಿಸಿ ಇಲಾಖೆಯ ಕಾನೂನು ಜಾರಿ ಅಧಿಕಾರಿಗಳ ಸಂಪರ್ಕ ವಿವರಗಳನ್ನು ಕೂಡ ನೀಡಲಾಗುತ್ತಿದೆ. ವ್ಯಸನಕ್ಕೆ ಬಲಿಯಾದ ಮಕ್ಕಳ ಪೋಷಕರನ್ನು ಕೂಡ ಸಮಾಲೋಚನೆಯ ಭಾಗವಾಗಿ ಆಹ್ವಾನಿಸಲಾಗುತ್ತಿದೆ. ಇಲಾಖೆಯ ಕಾರ್ಯನಿರ್ವಾಹಕ ಅಧಿಕಾರಿಗಳಿಗೆ ಅಬಕಾರಿ ಹಾಗೂ ಎನ್.ಡಿ.ಪಿ.ಎಸ್. ಕಾಯ್ದೆಯ ಜಾರಿ ಮತ್ತು ತನಿಖಾ ಕಾರ್ಯಗಳನ್ನು ವಿಶ್ಲೇಷಣೆ ನಡೆಸಿ ಕಟ್ಟುನಿಟ್ಟಿನ ಕ್ರಮ ಕೈಗೊಳ್ಳುವ ಸೂಚನೆಗಳನ್ನು ನೀಡಲಾಗಿರುತ್ತದೆ.

**ಕಡತ ಸಂಖ್ಯೆ:** ಆಕುಕ 129 ಎಸ್‌ಬಿವಿ 2025.

**(ದಿನೇಶ್ ಗುಂಡೂರಾವ್ )**
ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು.